ಇ) ರೈತರು ಬೆಳೆಯುವ ಬೆಳೆಗಳಲ್ಲಿ ಹೆಚ್ಚಿನ ಇಳುವರಿ ಪಡೆಯುವ ಸಲುವಾಗಿ ರಸಗೊಬ್ಬರಗಳ ಬಳಕೆ ಅವಶ್ಯಕವಿರುತ್ತದೆ.

ಈ) ರಸಗೊಬ್ಬರ ಬೆಲೆ ನಿರ್ಧರಿಸುವ ನೀತಿಯು ಕೇಂದ್ರ ಸರ್ಕಾರದ ವ್ಯಾಪ್ತಿಯಲ್ಲಿ ಬರುತ್ತದೆ.

ರಸ್ತೆಗಳನ್ನು ಡಾಂಬರೀಕರಣ ಮಾಡಲು ಅನುದಾನ ಬಿಡುಗಡೆ

330 (351) ಶ್ರೀ ಸಂಗಮೇಶ್ವರ ಬಿ.ಕೆ. (ಭದ್ರಾವತಿ) :– ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಭದ್ರಾವತಿ ನಗರಸಭೆ ವ್ಯಾಪ್ತಿಯ 35 ವಾರ್ಡ್‌ಗಳ ರಸ್ತೆಗಳನ್ನು ಸಂಪೂರ್ಣವಾಗಿ ಗುಂಡಿಗಳು ಬಿದ್ದು ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

ಆ) ಬಂದಿದ್ದಲ್ಲಿ, ಈ ರಸ್ತೆಗಳನ್ನು ಡಾಂಬರೀಕರಣ ಮಾಡಲು ಅನುದಾನ ಬಿಡುಗಡೆ ಮಾಡುವಂತೆ ಸರ್ಕಾರಕ್ಕೆ ಹಲವಾರು ಭಾರಿ ಪ್ರಸ್ತಾವನೆಯನ್ನು ಸಲ್ಲಿಸಿದರೂ ಈವರೆಗೆ ಅನುದಾನ ಬಿಡುಗಡೆ ಮಾಡಿರುವುದಿಲ್ಲ ಯಾವಾಗ ಅನುದಾನ ಬಿಡುಗಡೆ ಮಾಡಲಾಗುವುದು ?

ಶ್ರೀ ಬಾಲಚಂದ್ರ ಲಕ್ಷ್ಮಣರಾವ್ ಜಾರಕಿಹೋಳಿ (ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು):–

ಅ) ಹೌದು.

ಆ) 2011–12ನೇ ಸಾಲಿನ ಎಸ್.ಎಫ್.ಸಿ. ಮುಕ್ತನಿಧಿ ಅನುದಾನದಡಿಯಲ್ಲಿ ನಿಗದಿಗೊಳಿಸಿದ ರೂ. 757.46 ಲಕ್ಷಗಳ ಅನುದಾನದಲ್ಲಿ ಗುಂಡಿಗಳನ್ನು ಮುಚ್ಚಲು ರೂ. 13.80 ಲಕ್ಷಗಳನ್ನು ಕಾಯ್ದಿರಿಸಲಾಗಿದೆ.

ಪರ್ಯಾಯ ಸೇತುವೆ ನಿರ್ಮಾಣ

331 (352) ಶ್ರೀ ಸಂಗಮೇಶ್ವರ ಬಿ.ಕೆ. (ಭದ್ರಾವತಿ) :– ಮಾನ್ಯ ಲೋಕೋಪಯೋಗಿ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಬೆಂಗಳೂರು, ಹೊನ್ನಾವರ, ಭದ್ರಾವತಿಯ ನಗರದ ಒಳಗಡೆಯಿಂದ ಹೋಗುವ ಲೋಕೋಪಯೋಗಿ ಇಲಾಖೆಗೆ ಸೇರಿದ 150 ವರ್ಷದ ಸೇತುವೆಯು

ಭದ್ರಾವತಿ ನಗರದಲ್ಲಿ ಇದ್ದು ಎರಡು ಕೈಗಾರಿಕೆಗಳು ಇದ್ದು ವಾಹನಗಳ ಬೃಹತ್ ಸಂಚಾರವು ನಡೆಯುತ್ತಿರುವುದರಿಂದ ಯಾವ ಸಮಯದಲ್ಲಾದರೂ ಸೇತುವೆ ಬಿದ್ದು ಅಪಘಾತವಾಗುವ ಸಂಭವವಿರುತ್ತದೆ, ಇದರ ಬಗ್ಗೆ ಪ್ರಸ್ತಾವನೆಗೆ ಕೊಟ್ಟಿದ್ದು, ಹೊಸ ಸೇತುವೆ ನಿರ್ಮಿಸಲು ಸರ್ಕಾರ ಕೈಗೊಂಡ ಕ್ರಮವೇನು ?

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು):–

ಅ) ಭದ್ರಾವತಿ ನಗರದ ಮಾಧವರಾವ್ ಸರ್ಕಲ್ ಬಳಿ ಮಲ್ಪೆ–ಮೊಳಕಾಲ್ಮೂರು ರಾಜ್ಯ ಹೆದ್ದಾರಿ ಕಿ.ಮೀ. 165.75 ರಲ್ಲಿ ಭದ್ರಾ ನದಿಗೆ ಅಡ್ಡಲಾಗಿ ನಿರ್ಮಿಸಿರುವ ಸೇತುವೆಯು ಬಹಳ ಪುರಾತನವಾಗಿದ್ದು ಶಿಥಿಲಾವಸ್ಥೆಯಲ್ಲಿರುತ್ತದೆ. ಸದರಿ ಸೇತುವೆಯನ್ನು ಬಲವೃದ್ಧಿಗೊಳಿಸುವಂತೆ ಮಾಡಲು ಕಾಮಗಾರಿ ಗುಣನಿಯಂತ್ರಣ ಕಾರ್ಯಪಡೆಯು ಕಾಮಗಾರಿ ಪರೀಕ್ಷೆಯನ್ನು ನಡೆಸಿ ನೀಡಿದ ಸಲಹೆಗಳ ಮೇರೆಗೆ ಸದರಿ ಸೇತುವೆಯನ್ನು ಬಲಪಡಿಸಲು ರೂ. 500 ಲಕ್ಷಗಳು ಹಾಗೂ ಪುನರ್ ನಿರ್ಮಿಸಲು ರೂ. 1500 ಲಕ್ಷಗಳ ರೇಖಾ ಅಂದಾಜು ತಯಾರಿಸಿದ್ದು ಅನುದಾನದ ಲಭ್ಯತೆಯ ಮೇರೆಗೆ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು.

ಮೀನುಗಾರರ ವಸತಿ

333 (639) ಶ್ರೀ ಶಿವಲಿಂಗೇಗೌಡ ಕೆ.ಎಂ. (ಅರಸೀಕೆರೆ) :– ಮಾನ್ಯ ಮೀನುಗಾರಿಕೆ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಕರ್ನಾಟಕ ರಾಜ್ಯದಲ್ಲಿರುವ ಮೀನುಗಾರರಿಗೆ ಹೆಚ್ಚಿನ ಪ್ರಮಾಣದಲ್ಲಿ ವಸತಿ ಕಲ್ಪಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಬಂದಿದ್ದಲ್ಲಿ, ಹೆಚ್ಚಿನ ಪ್ರಮಾಣದಲ್ಲಿ ವಸತಿ ಕಲ್ಪಿಸದಿರಲು ಕಾರಣಗಳೇನು;

ಇ) ಕಳೆದ ಎರಡು ವರ್ಷಗಳಲ್ಲಿ ಎಷ್ಟು ಫಲಾನುಭವಿಗಳಿಗೆ ವಸತಿ ಸೌಲಭ್ಯ ಕಲ್ಪಿಸಲಾಗಿದೆ (ಕ್ಷೇತ್ರವಾರು ಮಾಹಿತಿ ನೀಡುವುದು) ?

ಶ್ರೀ ಆನಂದ ವಸಂತ ಅಸ್ನೋಟಿಕರ್ (ಮೀನುಗಾರಿಕೆ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು):–

ಅ) ಹೌದು.